# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 247 (175)
ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರು
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 12.08.2025
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು.

<table>
<tr><th>ಕ್ರ.ಸಂ.</th><th>ವಿಷಯ</th><th>ಉತ್ತರ</th></tr>
<tr><td>(ಅ)</td><td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ನಗರಸಭೆಗಳು ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾದ ವಿವಿಧ ವೃಂದದ ಹುದ್ದೆಗಳು ಎಷ್ಟು; ಭರ್ತಿಗೊಂಡು ಪ್ರಸ್ತುತ ಖಾಲಿ ಇರುವ ಹುದ್ದೆಗಳು ಎಷ್ಟು; (ಸಂಪೂರ್ಣ ವಿವರ ನೀಡುವುದು)</td><td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ನಗರಸಭೆಗಳು ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾದ ವಿವಿಧ ವೃಂದದ ಮಂಜೂರಾದ, ಭರ್ತಿಯಾದ ಮತ್ತು ಖಾಲಿ ಹುದ್ದೆಗಳ ವಿವರವನ್ನು ಕೆಳಕಂಡಂತಿರುತ್ತದೆ.
<table>
<tr><th>ಜಿಲ್ಲೆ ಹೆಸರು</th><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಭರ್ತಿಗೊಂಡ ಹುದ್ದೆಗಳ ಸಂಖ್ಯೆ</th><th>ಮಂಜೂರಾದ ಖಾಲಿ ಹುದ್ದೆಗಳ ಎದುರಾಗಿ ಗುತ್ತಿಗೆ ಹೊರಗುತ್ತಿಗೆ / ದಿನಗೂಲಿ / ಕ್ಷೇಮಾಭಿವೃದ್ಧಿ / ನೇರಪಾವತಿಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ</th><th>ಒಟ್ಟು ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ</th><th>ಖಾಲಿ ಹುದ್ದೆಗಳ ಸಂಖ್ಯೆ</th></tr>
<tr><td>ದಕ್ಷಿಣ ಕನ್ನಡ</td><td>1149</td><td>352</td><td>349</td><td>701</td><td>448</td></tr>
<tr><td>ಉಡುಪಿ</td><td>799</td><td>398</td><td>211</td><td>609</td><td>190</td></tr>
<tr><td>ಒಟ್ಟು</td><td>1948</td><td>750</td><td>560</td><td>1310</td><td>638</td></tr>
</table></td></tr>
<tr><td>(ಆ)</td><td>ಖಾಲಿ ಇರುವ ಹುದ್ದೆಗಳಿಂದ ಸಾರ್ವಜನಿಕರಿಗೆ ಸೇವೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮಂಜೂರಾದ ಒಟ್ಟು 1948 ಹುದ್ದೆಗಳಿಗೆದುರಾಗಿ 750 ಖಾಯಂ ಅಧಿಕಾರಿ/ನೌಕರರು ಮತ್ತು ಗುತ್ತಿಗೆ/ಹೊರಗುತ್ತಿಗೆ/ ದಿನಗೂಲಿ/ ಕ್ಷೇಮಾಭಿವೃದ್ಧಿ/ ನೇರಪಾವತಿಯಡಿ 560 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>ಖಾಯಂ ಮತ್ತು ಖಾಯಂ ಅಲ್ಲದ ಅಧಿಕಾರಿ/ಸಿಬ್ಬಂದಿ ವರ್ಗದವರಿಂದ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಿರುವುದರಿಂದ ಆಡಳಿತಾತ್ಮಕವಾಗಿ ಸಾರ್ವಜನಿಕರಿಗೆ ಸೇವೆ ನೀಡಲು ಯಾವುದೇ ರೀತಿಯ ವಿಳಂಬವಾಗುತ್ತಿರುವುದಿಲ್ಲ.</td></tr>
<tr><td>(ಇ)</td><td>ಸದರಿ ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಮಾಹಿತಿ ನೀಡುವುದು)</td><td>ಸರ್ಕಾರದ ಸುತ್ತೋಲೆ ಆದೇಶ ಸಂಖ್ಯೆ: ಸಿಆಸುಇ 388 ಸೇನೆನಿ 2024 ದಿನಾಂಕ: 25.11.2024 ಮತ್ತು 29.03.2025ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ (ಅನುಬಂಧ-1). ಅನುಮತಿಸಿದ ನಂತರ ಖಾಲಿ ಇರುವ ಮೂಲ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಪರಿಶೀಲಿಸಲಾಗುವುದು.</td></tr>
</table>

| | | |
|---|---|---|
| (ಈ) | ಸದರಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೇಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ? (ಮಾಹಿತಿ ನೀಡುವುದು) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೇಗೇರಿಸುವ ಪ್ರಸ್ತಾವನೆಗಳು ಯಾವುದು ಇರುವುದಿಲ್ಲ. |

**ಸಂಖ್ಯೆ: ನಅಇ 26 ಎಲ್‌ಸಿಕ್ಯೂ 2025**

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು

ಕರ್ನಾಟಕ ಸರ್ಕಾರ

16

ಸಂಖ್ಯೆ:ಸಿಆಸುಇ 388 ಸೇನಿನಿ 2024

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 29.03.2025

**ಸುತ್ತೋಲೆ**

ವಿಷಯ: ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳ ನೇಮಕಾತಿಗಾಗಿ ಹೊಸದಾಗಿ ಅಧಿಸೂಚನೆ ಹೊರಡಿಸುವುದನ್ನು ತಡೆಹಿಡಿಯುವ ಬಗ್ಗೆ.

ಉಲ್ಲೇಖ: ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:25.11.2024

******

ಉಲ್ಲೇಖಿತ ದಿನಾಂಕ:25.11.2024 ಸುತ್ತೋಲೆಯಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ.

ಆದಾಗ್ಯೂ ಕೆಲವು ನೇಮಕಾತಿ ಪ್ರಾಧಿಕಾರಗಳು ಈ ಸೂಚನೆಗಳನ್ನು ಉಲ್ಲಂಘಿಸಿ ನೇರ ನೇಮಕಾತಿ ಮಾಡಲು ಹೊಸ ಅಧಿಸೂಚನೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನಲೆಯಲ್ಲಿ ದಿನಾಂಕ:25.11.2024ರ ನಂತರ ನೇರ ನೇಮಕಾತಿಗಾಗಿ ಯಾವುದೇ ಹೊಸ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಈ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲು ಆಯಾಯ ನೇಮಕಾತಿ ಪ್ರಾಧಿಕಾರಗಳಿಗೆ ಈ ಮೂಲಕ ಸೂಚಿಸಿದೆ.

ಮುಂದುವರೆದು, ದಿನಾಂಕ:25.11.2024ರ ಸುತ್ತೋಲೆಯನ್ನು ಉಲ್ಲಂಘಿಸುವ ಎಲ್ಲಾ ನೇಮಕಾತಿ ಪ್ರಾಧಿಕಾರಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಆಯಾಯ ಆಡಳಿತ ಇಲಾಖೆಯ ಕಾರ್ಯದರ್ಶಿಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಈ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

Uma Varad... 29/3/25
(ಉಮಾ ವರದಯ್ಯ)
ಸರ್ಕಾರದ ಉಪ ಕಾರ್ಯದರ್ಶಿ-1
ಸಿಆಸು ಇಲಾಖೆ (ಸೇವಾ ನಿಯಮಗಳು)

**ಇವರಿಗೆ:**

ಸಂಕಲನಕಾರರು, ಇ-ರಾಜ್ಯಪತ್ರ